ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330ರಡಿ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಹೇಳಿಕೆ.

- - o - -

**ವಿಷಯ**

ಕಳೆದ ಒಂದು ವರ್ಷದಿಂದ ಕೈಗಾರಿಕಾ ವಲಯಗಳಲ್ಲಿ ಬಡಾವಣೆ ಅಭಿವೃದ್ಧಿಪಡಿಸುವಲ್ಲಿ ಹಾಗೂ ಗುತ್ತಿಗೆದಾರರಿಗೆ ಟೆಂಡರ್ ಮುಖಾಂತರ ಅವಾರ್ಡ್ ಮಾಡುವಾಗ ತಾಂತ್ರಿಕ ಮತ್ತು ಆರ್ಥಿಕ ಬಿಡ್ಡ್‌ಗಳನ್ನು ಅಂತಿಮಗೊಳಿಸುವಾಗ ನಿಯಮಾನುಸಾರ ಪಾರದರ್ಶಕತೆಯನ್ನು ಪಾಲಿಸದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಬಗ್ಗೆ ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಉತ್ತರ**

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಕೈಗಾರಿಕಾ ಪ್ರದೇಶಗಳಲ್ಲಿ ಬಡಾವಣೆ ಅಭಿವೃದ್ಧಿಪಡಿಸುವಲ್ಲಿ ಕಳೆದ ಒಂದು ವರ್ಷದಿಂದ ಗುತ್ತಿಗೆದಾರರಿಗೆ ಟೆಂಡರ್ ಮುಖಾಂತರ ಅವಾರ್ಡ್ ಮಾಡುವಾಗ ತಾಂತ್ರಿಕ ಮತ್ತು ಆರ್ಥಿಕ ಬಿಡ್ಡ್‌ಗಳನ್ನು ಅಂತಿಮಗೊಳಿಸುವಾಗ ನಿಯಮಾನುಸಾರ ಇ-ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಲಾದ ಗುತ್ತಿಗೆದಾರರ ತಾಂತ್ರಿಕ ಮತ್ತು ಆರ್ಥಿಕ ಬಿಡ್ಡುಗಳು ಬಿಡ್ ಡಾಕ್ಯುಮೆಂಟ್‌ನಂತೆ ಕ್ರಮ ಬದ್ಧವಾಗಿರುವುದನ್ನು ಕಟ್ಟುನಿಟ್ಟಾಗಿ ಪರಿಶೀಲಿಸಿ ಅರ್ಹ ಗುತ್ತಿಗೆದಾರರನ್ನು ಆಯ್ಕೆ ಮಾಡಲಾಗುತ್ತಿದೆ.

ತಾಂತ್ರಿಕ ಮತ್ತು ಆರ್ಥಿಕ ಬಿಡ್ಡುಗಳನ್ನು ಅಂತಿಮಗೊಳಿಸುವಾಗ ನಿಯಮಾನುಸಾರ ಪಾರದರ್ಶಕತೆಯನ್ನು ಪಾಲಿಸಲಾಗುತ್ತಿದ್ದು, ಮಂಡಳಿಯ ಬಡಾವಣೆ ಅಭಿವೃದ್ಧಿ ಕಾಮಗಾರಿಗಳು ಸಮರ್ಪಕವಾಗಿ ನಡೆಯುತ್ತಿದ್ದು ಕಾಮಗಾರಿಯಲ್ಲಿ ಗುಣಮಟ್ಟವನ್ನು ಕಾಪಾಡಲಾಗುತ್ತಿದೆ. ಟೆಂಡರ್‌ಅನ್ನು ಅಂತಿಮಗೊಳಿಸುವ ಸಂದರ್ಭದಲ್ಲಿ ಪಾರದರ್ಶಕತೆಯ ಉಲ್ಲಂಘನೆಯಾಗಿರುವುದಿಲ್ಲ.

(ಜಗದೀಶ ಶೆಟ್ಟರ್)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಸಾರ್ವಜನಿಕ ಉದ್ದಿಮೆ ಸಚಿವರು

ಸಂಖ್ಯೆ: ಸಿಐ 60 ಐಎಪಿ(ಇ) 2020